**By RPAD**

## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/294/ಗ್ರಾಪಂಕಾ/2016 ದಿನಾಂಕ: 25-06-2016
2. ಅಪರ ನಿಭಂಧಕರು ವಿಚಾರಣೆಗಳು-3 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/226/2016/ARE-3, ದಿನಾಂಕ 02.02.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/226/2016/ARE-3, ದಿನಾಂಕ 10.02.2017.
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: Uplok-2/DE/226/2016/ARE-3, ದಿನಾಂಕ 13.02.2017

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರು 2011-12 ನೇ ಸಾಲಿನಲ್ಲಿ ಇಂದಿರಾ ಆವಾಸ ಯೋಜನೆ ಅಡಿಯಲ್ಲಿ ಮನೆ ನಿರ್ಮಾಣ ಮಾಡದೆ, ದಾಖಲೆಗಳನ್ನು ಸೃಷ್ಟಿಸಿ ಫಲಾನುಭವಿಗಳಿಗೆ ಹಣ ಮಂಜೂರು ಮಾಡಿ ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತಾರೆ"

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ಇವರ ವಿರುದ್ಧದ ಆರೋಪದ ಕುರಿತು ನೋಟಿಸ್ ಜಾರಿ ಮಾಡಲು ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಚಾಮರಾಜನಗರ ಜಿಲ್ಲೆ ರವರಿಗೆ ನೀಡಲಾಗಿತ್ತು. ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಚಾಮರಾಜನಗರ ಜಿಲ್ಲೆ ರವರು ಆಪಾದಿತ ನೌಕರರಾದ ಶಿಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರು 18-11-2016 ರಂದು ಮೃತಪಟ್ಟಿರುವುದಾಗಿ ವರದಿ ನೀಡಿರುತ್ತಾರೆಂದು ಅಪರ ನಿಬಂಧಕರು, ವಿಚಾರಣೆಗಳು-3 ರವರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-3, ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ, ರವರು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು

ಕೈಬಿಡಲಾಗಿದೆ ಎಂದು ತಿಳಿಸಿರುತ್ತಾರೆ ಮಾನ್ಯ ಉಪಲೋಕಾಯುಕ್ತರ ತಮ್ಮ ವರದಿಯಲ್ಲಿ ಆಪಾದಿರ ನೌಕರರು 18-11-2016 ರಂದು ಮೃತಪಟ್ಟಿರುವುದರಿಂದ ಶ್ರೀ ಕೆಂಪರಾಜು, ಕಾರ್ಯದರ್ಶಿ ಇವರ ವಿರುದ್ಧದ ವಿಚಾರಣೆ ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 124 ಗ್ರಾಪಂಕಾ 2017**
**ಬೆಂಗಳೂರು, ದಿನಾಂಕ-21-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರು ದಿನಾಂಕ 18-11-2016 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಾಮರಾಜನಗರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ (ದಿವಂಗತ ಶ್ರೀ ಕೆಂಪರಾಜು, ಕಾರ್ಯದರ್ಶಿ, ಕುಣಗಳ್ಳಿ ಗ್ರಾಮ ಪಂಚಾಯಿತಿ, ಕೊಳ್ಳೆಗಾಲ ತಾಲ್ಲೂಕು, ಚಾಮರಾಜನಗರ ಜಿಲ್ಲೆ ರವರ ಕುಟುಂಬದವರಿಗೆ ಜಾರಿ ಮಾಡಿ ವರದಿ ನೀಡಲು ತಿಳಿಸಲಾಗಿದೆ)
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.